ಬಸವಕಲ್ಯಾಣ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆ.

3071(3688)

ಶ್ರೀ ಮುಳೆ ಎಂ.ಜಿ.(ಬಸವ ಕಲ್ಯಾಣ): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

ಅ) ಬಸವ ಕಲ್ಯಾಣ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆ ಸ್ಥಾಪಿಸಲು ಸರ್ಕಾರ ಮಂಜೂರಾತಿ ನೀಡಿದೆಯೇ? ಹಾಗಿದ್ದಲ್ಲಿ ಯಾವಾಗ ಮಂಜೂರಾತಿ ನೀಡಲಾಯಿತು?

ಆ) ಬಸವ ಕಲ್ಯಾಣ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆ ಎಂದಿನಿಂದ ಕಾರ್ಯಾರಂಭ ಮಾಡುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು):

ಅ) ಹೌದು. ಸರ್ಕಾರದ ಆದೇಶ ಸಂಖ್ಯೆ ಒಇ 130 ಕಅಸೇ 95, ದಿನಾಂಕ: 6-3-96ರಲ್ಲಿ ಮಂಜೂರಾತಿ ನೀಡಲಾಗಿರುತ್ತದೆ.

ಆ) ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲು ಬೇಕಾಗಿರುವ ಮೂಲಭೂತ ಸೌಲಭ್ಯಗಳು ದೊರಕಿದ ನಂತರ ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲಾಗುವುದು.

ಬೀದರ್ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ.

3073(3691)

ಶ್ರೀ ಎಂ.ಜಿ.ಮುಳೆ(ಬಸವಕಲ್ಯಾಣ): ಮಾನ್ಯ ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

ಅ. ಬೀದರ್ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಲು ಹಮ್ಮಿಕೊಂಡಿರುವ ಯೋಜನೆಗಳೇನು? (ತಾಲ್ಲೂಕುವಾರು ವಿವರ ನೀಡುವುದು)

ಆ. ಬೀದರ್ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಅಭಿವೃದ್ಧಿಗಾಗಿ ಸರ್ಕಾರ ವಿಶೇಷವಾದ ಉತ್ತೇಜನ ನೀಡಲು ಯೋಚಿಸಿದೆಯೇ? ಹಾಗಿದ್ದರೆ ಅದರ ರೂಪ ರೇಷೆಗಳೇನು?

ಶ್ರೀ ಎಂಎಂ.ನಾಣಯ್ಯ (ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು):

ಅ. ಬೀದರ್ ಜಿಲ್ಲೆಯಲ್ಲಿ ಇರುವ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಯುವ.ಕಾಮ್ ಕೇಂದ್ರವನ್ನು ಸ್ಥಾಪಿಸಿ, ಗ್ರಾಮೀಣ ನಿರುದ್ಯೋಗಿ ಯುವ ಜನಾಂಗಕ್ಕೆ ಕಂಪ್ಯೂಟರ್ ತರಬೇತಿ ನೀಡುವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಈಗಾಗಲೇ ಬಿದರ್‌ನಲ್ಲಿ ಪೈಲಟ್ ಯೋಜನೆಯಡಿಯಲ್ಲಿ ಒಂದು ಯುವ.ಕಾಮ್ ಕೇಂದ್ರವನ್ನು ಸ್ಥಾಪಿಸಿ, ತರಬೇತಿ ನೀಡಲಾಗುತ್ತಿದೆ.

ಆ. ಸಹಸ್ರಮಾನದ ಮಾಹಿತಿ ತಂತ್ರಜ್ಞಾನ ನೀತಿಯು ರಾಜ್ಯಾದ್ಯಂತ ಅನ್ವಯಿಸಲಿದ್ದು, ಈ ನೀತಿಯಲ್ಲಿರುವ ಪ್ರೋತ್ಸಾಹಕಗಳು, ಮತ್ತೀಯ ಉತ್ತೇಜನ ಸೌಲಭ್ಯಗಳು ಮತ್ತು ಏನಾಯಿತಿಗಳು ಬೀದರ್ ಜಿಲ್ಲೆಗೂ ಅನ್ವಯಿಸುತ್ತವೆ. ಮಾಹಿತಿ ತಂತ್ರಜ್ಞಾನ ಅಭಿವೃದ್ಧಿಗಾಗಿ ಬೀದರ್ ಜಿಲ್ಲೆಗಾಗಿಯೇ ಈವರೆಗೆ ಯಾವುದೇ ವಿಶೇಷ ಯೋಜನೆಯನ್ನು ರೂಪಿಸಿರುವುದಿಲ್ಲ

ಬಸವಕಲ್ಯಾಣ ಕ್ಷೇತ್ರದಲ್ಲಿ ಪಡಿತರ ಚೀಟಿಗಳ ವಿತರಣೆ.

3074(3692)

ಶ್ರೀ ಎಂ.ಜಿ.ಮುಳೆ(ಬಸವಕಲ್ಯಾಣ): ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವ ಕಲ್ಯಾಣ ಮತಕ್ಷೇತ್ರದಲ್ಲಿ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲು ಗುರುತಿಸಲಾಗಿದೆ?

ಆ) ಇಲ್ಲಿಯವರೆಗೆ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ? (ಪಡಿತರ ಚೀಟಿವಾರು ವಿವರ ನೀಡುವುದು)

ಇ) ಇನ್ನೂ ಎಷ್ಟು ಜನರಿಗೆ ಪಡಿತರ ಚೀಟಿ ವಿತರಿಸಲು ಬಾಕಿ ಇದೆ? ಯಾವಾಗ ವಿತರಿಸಲಾಗುವುದು?

ಶ್ರೀ ಡಿ.ಬಿ.ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು):

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಒಟ್ಟು 43543 ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.